ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

1

ಶಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 4/4/2021

# ‘ಚುನಾವಣೆ ನಂತರ ಗಮನ’

## ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಈಶ್ವರಪ್ಪ ಪತ್ರ

ಪ್ರಜಾವಾಣಿ ವಾರ್ತೆ 4-4-21

ನವದೆಹಲಿ: ಸಚಿವ ಕೆ.ಎಸ್. ಈಶ್ವರಪ್ಪ ಅವರು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ರಾಜ್ಯಪಾಲರಿಗೆ ಪತ್ರ ಬರೆದಿರುವ ಪ್ರಕರಣದ ಕುರಿತು ಐದು ರಾಜ್ಯಗಳ ಚುನಾವಣೆಯ ನಂತರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಗಮನ ಹರಿಸಲಿದ್ದಾರೆ.

ಖಾಸಗಿ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಈ ವಿಷಯ ತಿಳಿಸಿರುವ ಕೇಂದ್ರದ ಗೃಹ ಸಚಿವ ಅಮಿತ್ ಶಾ, ಪಕ್ಷದ ಮುಖಂಡರ ನಡುವೆ ಕರ್ನಾಟಕದಲ್ಲಿ ಉದ್ಭವಿಸಿರುವ ಬಿಕ್ಕಟ್ಟನ್ನು ಚುನಾವಣೆಯ ನಂತರ ನಡ್ಡಾ ಅವರು ಬಗೆಹರಿಸಲಿದ್ದಾರೆ ಎಂದು ಹೇಳಿದ್ದಾರೆ.



ಅಮಿತ್ ಶಾ

ಇದು ಪಕ್ಷದ ಆಂತರಿಕ ವಿಷಯ. ನಡ್ಡಾ ಅವರು ಈ ಸಂಬಂಧ ಕೂಲಂಕಷ ಚರ್ಚೆ ನಡೆಸಿ, ಮನಸ್ತಾಪ, ಗೊಂದಲ ಬಗೆಹರಿಸಲಿದ್ದಾರೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

3 ಕ್ಷೇತ್ರಗಳ ಉಪ ಚುನಾವಣೆಯ ಪ್ರಚಾರದಲ್ಲಿ ಪಾಲ್ಗೊಳ್ಳಲು ಪಕ್ಷದ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಅವರು ಇದೇ 8ರಂದು ರಾಜ್ಯ ಪ್ರವಾಸ ಕೈಗೊಳ್ಳಲಿದ್ದು, ರಾಜ್ಯಪಾಲರಿಗೆ ಬರೆದಿರುವ ಪತ್ರದಿಂದ ಉಂಟಾಗಿರುವ ಬೆಳವಣಿಗೆಗಳ ಕುರಿತು ಇದೇ ವೇಳೆ ಉಭಯ ನಾಯಕರೊಂದಿಗೆ ಚರ್ಚೆ ನಡೆಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಮುಖ್ಯಮಂತ್ರಿಯೊಂದಿಗಿನ ಮನಸ್ತಾಪದ ಕುರಿತು ನೇರವಾಗಿ ಅಥವಾ ಸಂಬಂಧಿಸಿದ ಮುಖಂಡರೊಂದಿಗೆ ಮಾತನಾಡುವ ಬದಲು ರಾಜ್ಯಪಾಲರಿಗೆ ಪತ್ರ ಬರೆದಿದ್ದಕ್ಕಾಗಿ ಈಶ್ವರಪ್ಪ ಅವರನ್ನು ತರಾಟೆಗೆ ತೆಗೆದುಕೊಂಡಿದ್ದ ಅರುಣ್ ಸಿಂಗ್, ಈ ರೀತಿ ಬಹಿರಂಗ ಪತ್ರ ಬರೆಯಬಾರದಿತ್ತು ಎಂದು ಹೇಳಿದ್ದರು.